ಆ. – ಇಲ್ಲ –

ಆ. ಉದ್ಭವಿಸುವುದಿಲ್ಲ

ಕಡಪಟ್ಟಿ ಹಾಗೂ ಸರೋಜಿನಿ ಮಹಿಷಿ ವರದಿಗಳ ಅನುಷ್ಠಾನ.

570 (1132): ಶ್ರೀ ಶಿವಶೇಖರಪ್ಪಗೌಡ ಶಿರವಾಳ್ (ಶಹಾಪುರ)

ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯಮಾಡಿ ಉತ್ತರಿಸುವರೇ ?

ಅ. ಕಡಪಟ್ಟಿ ಹಾಗೂ ಸರೋಜಿನಿ ಮಹಿಷಿ ಸಮಿತಿಗಳ ಶಿಫಾರಸ್ಸುಗಳನ್ನು ಸರ್ಕಾರವು ಒಪ್ಪಿರುವುದು ನಿಜವಲ್ಲವೆ ?

ಆ. ಹಾಗಿದ್ದಲ್ಲಿ ಸದರಿ ಶಿಫಾರಸ್ಸುಗಳನ್ನು ಕಾರ್ಯಗತಗೊಳಿಸಲಾಗಿದೆಯೇ ?

ಇ. ಹಾಗಿಲ್ಲದಿದ್ದಲ್ಲಿ ಕಾರ್ಯಗತಗೊಳಿಸುವುದರಲ್ಲಿ ವಿಳಂಬವಾಗಿರುವುದಕ್ಕೆ ಕಾರಣಗಳೇನು ?

ಶ್ರೀ ಎಂ. ವೀರಪ್ಪ ಮೊಯಿಲಿ (ಮುಖ್ಯ ಮಂತ್ರಿಯವರು):–

ಅ. ಹೌದು.

ಆ. ಹೌದು.

ಇ. ಉದ್ಭವಿಸುವುದಿಲ್ಲ.

ಕನಕಪುರ ತಾಲ್ಲೂಕಿನಲ್ಲಿ ಅಗ್ನಿಶಾಮಕ ಠಾಣೆ.

571 (1284): ಶ್ರೀ ಡಿ. ಕೆ. ಶಿವಕುಮಾರ್ (ಸಾತನೂರು)

ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ. ಕನಕಪುರ ತಾಲ್ಲೂಕಿನಲ್ಲಿ ಅಗ್ನಿಶಾಮಕ ಠಾಣೆ ಇಲ್ಲದೇ ಜನರಿಗೆ ಉಂಟಾಗಿರುವ ತೊಂದರೆ ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ. ಹಾಗಿದ್ದಲ್ಲಿ ಕನಕಪುರದಲ್ಲಿ ಯಾವಾಗ ಅಗ್ನಿಶಾಮಕ ಠಾಣೆ ಪ್ರಾರಂಭಮಾಡಲಾಗುವುದು ?

ಶ್ರೀ ಎಂ. ವೀರಪ್ಪಮೊಯಿಲಿ (ಮುಖ್ಯಮಂತ್ರಿಗಳು):–

ಅ. ಹೌದು.

ಆ. ಆದ್ಯತೆ, ಹಾಗೂ ಸಂಪನ್ಮೂಲಗಳನ್ನು ಆಧರಿಸಿ ಮುಂಬರುವ ವರ್ಷಗಳಲ್ಲಿ ಪರಿಶೀಲಿಸಲಾಗುವುದು.

ಅಪಘಾತಗಳು ಹಾಗೂ ಪರಿಹಾರ.

572 (1207): ಶ್ರೀ ಪಿ.ಜಿ.ಆರ್. ಸಿಂಧ್ಯ (ಕನಕಪುರ)

ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ. ರಾಜ್ಯದಲ್ಲಿ ಅಪಘಾತಗಳ ಸಂಖ್ಯೆ ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?